**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿ ಪರ ಶ್ರೀ ಜಿ ಆರ್ ಎ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ಸಾಕ್ಷಿಗೆ ನೀಡಿದ ಅಧಿಕಾರ ಪತ್ರದ ದೃಡಿಕರಿಸಿದ ಪ್ರತಿಯನ್ನು ನಿಪಿ 1 ಎಂದು ಗುರುತಿಸಲಾಯಿತು. ಸಾಲದ ಕರಾರು ಪತ್ರವನ್ನು ನಿಪಿ 2 ಎಂದು ಗುರುತಿಸಲಾಯಿತು. ಹೈಪಾಥಿಕೇಶನ್ ಪತ್ರವನ್ನು ನಿಪಿ 3 ಎಂದು ಗುರುತಿಸಲಾಯಿತು. ಸಾಲದ ಗ್ಯಾರಂಟಿ ಪತ್ರವನ್ನು ನಿಪಿ 4 ಎಂದು ಗುರುತಿಸಲಾಯಿತು. ಅಡಮಾನ ಪತ್ರವನ್ನು ನಿಪಿ 5 ಎಂದು ಗುರುತಿಸಲಾಯಿತು. ಸಾಲದ ರುಣಭಾರ ಪತ್ರವನ್ನು ನಿಪಿ 6 ಎಂದು ಗುರುತಿಸಲಾಯಿತು. ಸಾಲದ ಖಾತಾ ವಿವರಣೆಯನ್ನು ನಿಪಿ 7 ಎಂದು ಗುರುತಿಸಲಾಯಿತು.

1 ನೇ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯವಕಾಶ ಕೋರಿದ್ದು 1 ನೇ ಪ್ರತಿವಾದಿ ಯಾವುದೇ ಪ್ರತಿವಾದ ಪತ್ರವನ್ನು ಸಲ್ಲಿಸದೆ ಇರುವ ಕಾರಣಕ್ಕಾಗಿ ಸಮಯವಕಾಶ ನೀಡಲು ಯಾವುದೇ ಸಮಂಜಸ ಕಾರಣ ಇರುವುದಿಲ್ಲ. ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

**ಮರುವಿಚಾರಣೆ ಇರುವುದಿಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ